ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಮೂರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 28ನೇ ಜನವರಿ, 2014
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಮೂರನೇ ಪಟ್ಟಿ
ಆ) ದಿನಾಂಕ 27.01.2014ರ ಎರಡನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಸಿ.ಟಿ. ರವಿ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 28(456)	:	ಸಣ್ಣ ಕೈಗಾರಿಕೆಗಳು, ಮುಜರಾಯಿ ಮತ್ತು ಸಕ್ಕರೆ ಸಚಿವರು
ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಮೂರನೇ ಪಟ್ಟಿ

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

(ಸದಸ್ಯರಿಗೆ ಈಗಾಗಲೇ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೊದಲನೇ ಹಾಗೂ ಎರಡನೇ ಪಟ್ಟಿಯ ರೀತ್ಯಾ)

3. ಅರ್ಜಿಯನ್ನೊಪ್ಪಿಸುವುದು

ಶ್ರೀ ಕೆ. ಎನ್. ರಾಜಣ್ಣ (ಸದಸ್ಯರು) ಅವರು:-

ಮಧುಗಿರಿ ತಾಲ್ಲೂಕು ಕೊಟಗಾರ್ಲಹಳ್ಳಿ ಗ್ರಾಮಕ್ಕೆ ಪಶು ಆಸ್ಪತ್ರೆ ಮಂಜೂರಾತಿ ಬಗೆಗಿನ ಅರ್ಜಿಯನ್ನೊಪ್ಪಿಸುವುದು.

ಮು.ತಿ.ನೋ.,

4. ಶಾಸನ ರಚನೆ

I ವಿಧೇಯಕಗಳನ್ನು ಮಂಡಿಸುವುದು.

1) **ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2014**
ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪಶುಸಂಗೋಪನೆ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2) **ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕ, 2014**
ಶ್ರೀ ವಿನಯಕುಮಾರ್ ಸೊರಕೆ (ನಗರಾಭಿವೃದ್ಧಿ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

II ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1) **ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರ ಸೌಲಭ್ಯಗಳ ನಿಯಂತ್ರಣ) ವಿಧೇಯಕ, 2014**
ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರ ಸೌಲಭ್ಯಗಳ ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2) **ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2014**
ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪಶುಸಂಗೋಪನೆ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಪು.ತಿ.ನೋ.,

3) **ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕ, 2014**
ಶ್ರೀ ವಿನಯಕುಮಾರ್ ಸೊರಕೆ (ನಗರಾಭಿವೃದ್ಧಿ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ದಿನಾಂಕ 24ನೇ ಜನವರಿ 2014ರಂದು ಶ್ರೀ ಬಸವರಾಜ ರಾಯರೆಡ್ಡಿ ಯವರು "2014ರ ಜನವರಿ 22ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಘನತೆವೆತ್ತ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ಸೂಚಿಸಿದ ಪ್ರಸ್ತಾಪದ ಮೇಲೆ ಮುಂದುವರೆದ ಚರ್ಚೆ.

6. ಗಮನ ಸೆಳೆಯುವ ಸೂಚನೆಗಳು

1. ಶ್ರೀ ವಿಜಯಾನಂದ್ ಎಸ್. ಕಾಶಪ್ಪನವರ ಅವರು ಬಾಗಲಕೋಟೆ ಜಿಲ್ಲೆ ಹುನಗುಂದ ತಾಲ್ಲೂಕಿನ ಮರೋಳ ಏತ ನೀರಾವರಿ ಯೋಜನೆಯ ಕಾಮಗಾರಿಯು ಕಳಪೆ ಮಟ್ಟದಲ್ಲಿದ್ದು ವಿಳಂಬವಾಗುತ್ತಿರುವುದರಿಂದ ರೈತರಿಗೆ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

2. ಶ್ರೀ ಈ ತುಕಾರಾಂ ಅವರು ತುಂಗಾಭದ್ರಾ ಜಲಾಶಯದ ಹೆಚ್.ಎಲ್.ಸಿ. ಕಾಲುವೆಯಿಂದ ನಾರಿಹಳ್ಳ ಜಲಾಶಯಕ್ಕೆ ನೀರು ಹರಿಸಿ ಬಳ್ಳಾರಿ ಜಿಲ್ಲೆ ಸಂಡೂರು ಪಟ್ಟಣಕ್ಕೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

3. ಶ್ರೀ ಶಿವಾನಂದ ಎಸ್. ಪಾಟೀಲ್ ಅವರು ಬಸವನ ಬಾಗೇವಾಡಿ ತಾಲ್ಲೂಕಿನ ಮನಗೂಳಿ ಮತ್ತು ನಿಡಗುಂದಿ ಗ್ರಾಮಗಳನ್ನು ಹೋಬಳಿ ಕೇಂದ್ರಗಳನ್ನಾಗಿ ಘೋಷಣೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

4. ಶ್ರೀ ಎನ್.ಚಲುವರಾಯಸ್ವಾಮಿ ಅವರು ಬೆಂಗಳೂರು ಉತ್ತರ ತಾಲ್ಲೂಕು ಅರ್ಕಾವತಿ ಬಡಾವಣೆಗೆ ಸಂಬಂಧಿಸಿದಂತೆ ಐ.ಎಸ್.ಆರ್.ಓ ವರದಿಯಂತೆ ಸರ್ಕಾರ ಹೊರಡಿಸಿರುವ ಅಧಿಸೂಚನೆಯನ್ನು ಪುನರ್ ಪರಿಶೀಲಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಮು.ತಿ.ನೋ.,

5. ಶ್ರೀ ಹೆಚ್. ಡಿ. ರೇವಣ್ಣ ಅವರು ಹಾಸನ ಜಿಲ್ಲೆ ಹೊಳೆನರಸಿಪುರ ಕ್ಷೇತ್ರ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹಾಗೂ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜುಗಳಿಗೆ ಭೋದಕ/ಭೋದಕೇತರ ಸಿಬ್ಬಂದಿಗಳ ಹಾಗೂ ಮೂಲಭೂತ ಸೌಕರ್ಯಗಳ ಕೊರತೆಯಿಂದ ಗ್ರಾಮೀಣ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯವುದು.

6. ಶ್ರೀ ಕೆ.ಜಿ. ಬೋಪಯ್ಯ ಅವರು ಕೊಡಗು ಜಿಲ್ಲೆಯಲ್ಲಿ ಎಲ್ಲಾ ಬಾಣೆ ಜಾಗಗಳಿಗೆ ಕಂದಾಯ ವಿಧಿಸುವಂತೆ ಭೂ ಕಂದಾಯ ಕಾಯ್ದೆ ೮೦(1)ನ್ನು ತಿದ್ದುಪಡಿ ಮಾಡಿದ್ದರೂ ಅನುಷ್ಠಾನವಾಗದೇ ಬಾಣೆ ಜಾಗಗಳ ಮಾಲೀಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯವುದು.

7. ಶ್ರೀ ಹೆಚ್. ಕೆ. ಕುಮಾರಸ್ವಾಮಿ ಅವರು ಹಾಸನ ಜಿಲ್ಲೆ ಸಕಲೇಶಪುರ ಮತ್ತು ಆಲೂರು ತಾಲ್ಲೂಕುಗಳಲ್ಲಿ ಕಾಡಾನೆಗಳ ದಾಳ ಹೆಚ್ಚಾಗಿದ್ದು, ಆನೆಗಳನ್ನು ಹಿಡಿಯುವ ಕಾರ್ಯಾಚರಣೆ ಪ್ರಾರಂಭವಾಗದೆ ಅಲ್ಲಿನ ಜನಸಾಮಾನ್ಯರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

8. ಶ್ರೀ ಕೆ.ಎನ್. ರಾಜಣ್ಣ ಅವರು ತುಮಕೂರು ವಿಶ್ವವಿದ್ಯಾಲಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಅಂತಿಮ ಬಿಎಸ್ಸಿ ವಿದ್ಯಾರ್ಥಿಗಳ ಗಣಿತಶಾಸ್ತ್ರ ಉತ್ತರ ಪತ್ರಿಕೆಗಳು ಕಾಣೆಯಾಗಿದ್ದು ಪ್ರಾಂಶುಪಾಲರು ಕರ್ತವ್ಯ ಲೋಪ ಎಸಗಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯವುದು.

7. ನಿಯಮ ೬೯ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಕೆ.ಎಂ.ಶಿವಲಿಂಗೇಗೌಡ, ಕೆ.ಎಸ್. ಮಂಜುನಾಥ್, ಬಿ.ಸುರೇಶ್‌ಗೌಡ, ಎಂ.ಕೃಷ್ಣಾರೆಡ್ಡಿ ಹಾಗೂ ವೈ.ಎನ್. ರುದ್ರೇಶ್‌ಗೌಡ ಹಾಗೂ ಇತರರು ಬಯಲು ಸೀಮೆ ಪ್ರದೇಶಗಳಾದ ಅರಸೀಕೆರೆ, ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಇತರ ಪ್ರದೇಶಗಳಲ್ಲಿ ಎತ್ತಿನಹೊಳೆ ಯೋಜನೆಯನ್ನು ಕೈಗೆತ್ತಿಕೊಳ್ಳುವ ಬಗ್ಗೆ ಚರ್ಚೆ.

2. ಶ್ರೀಯುತರುಗಳಾದ ಜಗದೀಶ್ ಶೆಟ್ಟರ, ಹೆಚ್.ಡಿ. ಕುಮಾರಸ್ವಾಮಿ, ಸಿ.ಟಿ. ರವಿ ಬಿ.ಬಿ. ನಿಂಗಯ್ಯ, ಕೆ.ಜಿ. ಬೋಪಯ್ಯ ಹಾಗೂ ಇತರರು ಚಿಕ್ಕಮಗಳೂರು ಜಿಲ್ಲೆ ಮೂಡಿಗೆರೆ ತಾಲ್ಲೂಕಿನ ಕಳಸಾ ಹೋಬಳಿಯ ಇನಾಂ ಭೂಮಿ ಸಾಗುವಳಿ ತೆರವು ಕಾರ್ಯಾಚರಣೆ ಆರಂಭಿಸಿರುವುದರಿಂದ ರೈತ ಕುಟುಂಬಗಳಿಗೆ ತೊಂದರೆಯುಂಟಾಗುತ್ತಿರುವ ಬಗ್ಗೆ ಚರ್ಚೆ.

ಮು.ತಿ.ನೋ.,

೩. ಶ್ರೀ ಎಸ್.ಆರ್. ವಿಶ್ವನಾಥ್ ಅವರು ಅರ್ಕಾವತಿ ನದಿ ಮತ್ತು ಕುಮುದ್ವತಿ ನದಿಗಳ 1 ಕಿ.ಮೀ. ವ್ಯಾಪ್ತಿಯಲ್ಲಿ ಯಾವುದೇ ಭೂಮಿಯನ್ನು ಕೃಷಿಯೇತರ ಉದ್ದೇಶಕ್ಕೆ ಬಳಕೆ ಮಾಡದಿರುವ ಬಗ್ಗೆ ಹೊರಡಿಸಿರುವ ಸರ್ಕಾರಿ ಆದೇಶಕ್ಕೆ ತಿದ್ದುಪಡಿ ತರುವ ವಿಷಯದ ಬಗ್ಗೆ ಚರ್ಚೆ.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)